ಜೆಎಸ್‌ಎಸ್ ಮಹಾವಿದ್ಯಾಪೀಠ
ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಶಿವಾನುಭವ ದಾಸೋಹ–298

**25 ಫೆಬ್ರವರಿ 2023 * ಶನಿವಾರ * ಸಂಜೆ 6.00**

**ಸ್ಥಳ : ನಂ. 95, ಜೆಎಸ್‌ಎಸ್ ಬಡಾವಣೆ 2ನೇ ಹಂತ, ಮೈಸೂರು–28**
**(ಅಲ್ಲಮಪ್ರಭು ಪಾರ್ಕ್ ಎದುರು)**

---

**ದಿವ್ಯ ಆಶೀರ್ವಾದ**

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**
ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಶ್ರೀ ಸುತ್ತೂರು ಕ್ಷೇತ್ರ

**ಅಧ್ಯಕ್ಷತೆ**

**ಶ್ರೀ ಪಿ. ಶಿವರಾಜು**
ಹೆಚ್ಚುವರಿ ಆಯುಕ್ತರು, ಪ್ರಾದೇಶಿಕ ಆಯುಕ್ತರ ಕಛೇರಿ, ಮೈಸೂರು

**ಉಪನ್ಯಾಸ**

**ಪ್ರೊ. ಡಿ.ಎಸ್. ಸದಾಶಿವಮೂರ್ತಿ**
ನಿವೃತ್ತ ಪ್ರಾಧ್ಯಾಪಕರು, ಮೈಸೂರು

**ವಿಷಯ : ಕಳೆ ಮೆಳೆಯ ಕಿತ್ತಲ್ಲದೆ ಹೊಲ ಶುದ್ಧವಲ್ಲ**

**ಭಜನೆ**

**ಶ್ರೀ ಶಿವರಾತ್ರೀಶ್ವರ ಭಜನಾ ಮಂಡಳಿ ಮತ್ತು ಲಲಿತಾದ್ರಿ ಮಹಿಳಾ ವೇದಿಕೆ**
ಜೆಎಸ್‌ಎಸ್ ಬಡಾವಣೆ 2ನೇ ಹಂತ, ಮೈಸೂರು

---

**ಪ್ರಾಯೋಜಕರು**

**ಶ್ರೀಮತಿ ಸವಿತ ಮತ್ತು ಶ್ರೀ ಪಾಲಾಕ್ಷ**
ನಂ. 95, ಜೆಎಸ್‌ಎಸ್ ಬಡಾವಣೆ 2ನೇ ಹಂತ, ಮೈಸೂರು–28

**ತಮಗೆ ಆದರದ ಸ್ವಾಗತ**

ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕವೇ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಅವರು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ, ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿ ಮುಂತಾದ ಸಂಸ್ಥೆಗಳ ಮೂಲಕ ಧರ್ಮದಾಸೋಹವನ್ನು ನಡೆಸುತ್ತಿದ್ದರು. 1986 ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಯನ್ನು ಸ್ಥಾಪಿಸಿ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 12.5.1996 ರಂದು 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ಶ್ರೀ ಪಿ. ಶಿವರಾಜುರವರು** ಮಳವಳ್ಳಿ ತಾಲ್ಲೂಕು ಪೂರಿಗಾಲಿ ಗ್ರಾಮದವರು. 2010ರಲ್ಲಿ ಕರ್ನಾಟಕ ಲೋಕಸೇವಾ ಆಯೋಗದ ಕೆಎಎಸ್ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿ ಹಾವೇರಿಯಲ್ಲಿ ಉಪವಿಭಾಗಾಧಿಕಾರಿಗಳಾಗಿ ವೃತ್ತಿ ಪ್ರಾರಂಭಿಸಿದರು. ಸಕಲೇಶಪುರ, ಕೊಡಗು ಮತ್ತು ಬೆಂಗಳೂರಿನಲ್ಲಿ ವಿವಿಧ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಿದ್ದಾರೆ. ಪ್ರಸ್ತುತ ಮೈಸೂರು ಪ್ರಾದೇಶಿಕ ಆಯುಕ್ತರ ಕಛೇರಿಯಲ್ಲಿ ಹೆಚ್ಚುವರಿ ಆಯುಕ್ತರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಉತ್ತಮ ವಾಗ್ಮಿಗಳು ಮತ್ತು ಬರಹಗಾರರು. ಹಲವಾರು ರಾಷ್ಟ್ರೀಯ ವಿಚಾರಸಂಕಿರಣಗಳಲ್ಲಿ ಪ್ರಬಂಧ ಮಂಡಿಸಿದ್ದಾರೆ. ಅತ್ಯುತ್ತಮ ಸಾರ್ವಜನಿಕ ಸೇವೆಗಾಗಿ ಗೌರವ ಪುರಸ್ಕಾರವನ್ನು ಪಡೆದಿದ್ದಾರೆ.

**ಪ್ರೊ. ಡಿ.ಎಸ್. ಸದಾಶಿವಮೂರ್ತಿಯವರು** ನಂಜನಗೂಡು ತಾಲ್ಲೂಕು ದೇವನೂರು ಗ್ರಾಮದವರು. ಮೈಸೂರು ವಿಶ್ವವಿದ್ಯಾನಿಲಯದಿಂದ ಅರ್ಥಶಾಸ್ತ್ರ ವಿಷಯದಲ್ಲಿ ಎಂಎ ಪದವಿಯ ನಂತರ ಗುಂಡ್ಲುಪೇಟೆ ಜೆಎಸ್ಎಸ್ ಕಾಲೇಜಿನಲ್ಲಿ ಉಪನ್ಯಾಸಕರಾಗಿ ಸೇವೆ ಪ್ರಾರಂಭಿಸಿದರು. ನಂಜನಗೂಡು, ಮೈಸೂರಿನ ಕಾಲೇಜುಗಳಲ್ಲಿ ಮೂರು ದಶಕಗಳಿಗೂ ಹೆಚ್ಚು ಕಾಲ ಸೇವೆ ಸಲ್ಲಿಸಿ ನಿವೃತ್ತರಾಗಿದ್ದಾರೆ. ಉತ್ತಮ ವಾಗ್ಮಿಗಳು. ಸಾಹಿತ್ಯದಲ್ಲಿ ಆಸಕ್ತಿ ಹೊಂದಿರುವ ಇವರು ನಿರಂಜನ, ಮಹಾಘನ, ದೇವಸಿರಿ, ಸಮನ್ವಯ, ಸಂಚಲನ, ಬಸವಬಳ್ಳಿ ಮೊದಲಾದ ಸಂಸ್ಮರಣ ಸಂಚಿಕೆಗಳು ಮತ್ತು ಚೆನ್ನಶ್ರೀ ಗುರುವಂದನಾ ಗ್ರಂಥ ಹಾಗೂ ಕಾಲೇಜು ವಾರ್ಷಿಕ ಸಂಚಿಕೆಗಳನ್ನು ಸಂಪಾದಿಸಿದ್ದಾರೆ. ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯಕ್ರಮಾಧಿಕಾರಿಗಳಾಗಿಯೂ ಸೇವೆ ಸಲ್ಲಿಸಿದ್ದಾರೆ. ಮೈಸೂರಿನ ರೋಟರಿ ಸಂಸ್ಥೆಯ 'ಆದರ್ಶ ಶಿಕ್ಷಕ' ಮತ್ತು ಮರಪ್ಪಸ್ವಾಮಿ ಧಾರ್ಮಿಕ ದತ್ತಿಯ 'ಬಸವ ಭಾನು' ಪ್ರಶಸ್ತಿಗಳಿಗೆ ಭಾಜನರಾಗಿದ್ದಾರೆ.

**ಶ್ರೀ ಪಾಲಾಕ್ಷರವರು** ಮಳವಳ್ಳಿ ತಾಲ್ಲೂಕು ತೆಂಕಹಳ್ಳಿ ಗ್ರಾಮದವರು. ಜೆಎಸ್ಎಸ್ ವೈದ್ಯಕೀಯ ಕಾಲೇಜಿನಲ್ಲಿ ಪ್ರಥಮ ದರ್ಜೆ ಸಹಾಯಕರಾಗಿ ಕರ್ತವ್ಯ ನಿರ್ವಹಿಸಿ ನಿವೃತ್ತರಾಗಿರುವರು. ಧರ್ಮಪತ್ನಿ ಶ್ರೀಮತಿ ಸವಿತ ಗೃಹಿಣಿಯಾಗಿದ್ದಾರೆ. ಪುತ್ರಿ ಕು. ಪಿ. ಹರ್ಷಿತ ಎಂಎಸ್ಸಿ ಪದವೀಧರರಾಗಿದ್ದು, ಬಿಇಡಿ ಅಧ್ಯಯನ ಮಾಡುತ್ತಿದ್ದಾರೆ. ಪುತ್ರ ಶ್ರೀ ಪಿ. ಮಹಾಂತೇಶ್ ಬಿಇ ವ್ಯಾಸಂಗ ಮಾಡುತ್ತಿದ್ದಾರೆ.